# ಮಕ್ಕಳನ್ನು ಪುಸ್ತಕದ ಹುಳು ಮಾಡ್ಬೇಡಿ: ಮುಕುಂದರಾಜ್

## ಉತ್ತಮ ಪ್ರಜೆಯಾಗಿ ರೂಪಿಸುವುದು ಶಿಕ್ಷಕರ ಆದ್ಯ ಕರ್ತವ್ಯ



ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಶಿಕ್ಷಕರ ಸಂಘದಿಂದ ಹೆಬ್ಬಾಳದ ಜಿಕೆವಿಕೆಯಲ್ಲಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕುಂದರಾಜು ಉದ್ಘಾಟಿಸಿದರು. ವಿವಿ ಕುಲಪತಿ ಡಾ.ಎಸ್.ವಿ.ಸುರೇಶ ಮತ್ತಿತರರು ಹಾಜರಿದ್ದರು.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿದ್ಯಾರ್ಥಿಗಳನ್ನು ಪುಸ್ತಕದ ಹುಳುಗಳನ್ನಾಗಿ ಮಾಡದೆ ಮೌಲ್ಯಗಳನ್ನು ಕಲಿಸಿ ಉತ್ತಮ ಪ್ರಜೆಗಳನ್ನಾಗಿ ರೂಪಿಸುವುದು ಶಿಕ್ಷಕರ ಕರ್ತವ್ಯವಾಗ ಬೇಕು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕುಂದರಾಜು ಹೇಳಿದರು.

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಶಿಕ್ಷಕರ ಸಂಘದಿಂದ ಹೆಬ್ಬಾಳದ ಜಿಕೆವಿಕೆಯಲ್ಲಿ ಗುರುವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕ ಎಂದರೆ ಸರ್ವತೋಮುಖ ಏಳಿಗೆಗೆ ಶ್ರಮಿಸುವವರು ಎಂದು ಅರ್ಥ. ವಿದ್ಯಾರ್ಥಿಗಳನ್ನು ಪುಸ್ತಕದ ಹುಳುಗಳನ್ನಾಗಿ ಮಾಡದೆ ಮೌಲ್ಯಗಳನ್ನು ಕಲಿಸಿ ದೇಶದ ಉತ್ತಮ ಪ್ರಜೆಗಳಾಗಿ ರೂಪಿಸುವುದು ಗುರುವಿನ ಆದ್ಯ ಕರ್ತವ್ಯವಾಗಬೇಕು. ಅತಿ ಹೆಚ್ಚು ಉತ್ಪಾದಕ ಕ್ಷೇತ್ರವಾದ ಕೃಷಿಯಲ್ಲಿ ತೊಡಗಿರುವ ರೈತರಿಗೆ ಆತ್ಮ ಸ್ಥೈರ್ಯ ತುಂಬುವ ಗುರುತರವಾದ ಜವಾಬ್ದಾರಿ ಕೃಷಿ ವಿವಿ ಮೇಲಿದೆ ಎಂದರು.

**ಕನ್ನಡ ಶಾಲೆ ಪುನಃಶ್ಚೇತನಕ್ಕೆ ಶ್ರಮಿಸಿ:** ಪ್ರಸ್ತುತ ಪರಿಸ್ಥಿತಿಯಲ್ಲಿ ಕನ್ನಡ ಶಾಲೆಗಳನ್ನು ಮುಚ್ಚುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಕನ್ನಡ ಮಾಧ್ಯಮ, ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಶಿಕ್ಷಕ ದಿನಾಚರಣೆಯಂತಹ ಆಚರಣೆಗಳು ಕನ್ನಡ ಶಾಲೆಗಳ ಪುನಃಶ್ಚೇತನಕ್ಕೆ ವೇದಿಕೆಯನ್ನು ಕಲ್ಪಿಸಬೇಕು. ಅದರಲ್ಲೂ ಗ್ರಾಮೀಣ ಪ್ರದೇಶದ ಕನ್ನಡ ಶಾಲೆಗಳನ್ನು ಅಭಿವೃದ್ಧಿಪಡಿಸಲು ನಾವೆಲ್ಲರೂ ಶ್ರಮಿಸಬೇಕು ಎಂದು ಅಭಿಪ್ರಾಯಪಟ್ಟರು.

ವಿವಿ ಕುಲಪತಿ ಡಾ। ಎಸ್.ವಿ.ಸುರೇಶ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕರ ಸಂಘದ ಅಧ್ಯಕ್ಷ ಡಾ। ಕೆ.ಎಸ್.ರಾಜಶೇಖರಪ್ಪ ಉಪಸ್ಥಿತರಿದ್ದರು.

06-09-2024
Kannadaprabha Pg 04

ಮುಂದಿನ ವಾರದಿಂದ ಬೆಂಗಳೂರಿನಲ್ಲೂ ಮಾರಾಟ: ಪ್ರಲ್ಹಾದ ಜೋಶಿ

# ರಿಯಾಯಿತಿ ದರದಲ್ಲಿ ಈರುಳ್ಳಿ



ನವದೆಹಲಿ (ಪಿಟಿಐ): ಈರುಳ್ಳಿ ಬೆಲೆ ಏರಿಕೆಯನ್ನು ನಿಯಂತ್ರಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ಈರುಳ್ಳಿ ಮಾರಾಟ ಮಾಡಲು ಆರಂಭಿಸಿದೆ. ದೆಹಲಿ-ಎನ್‌ಸಿಆರ್ ಮತ್ತು ಮುಂಬೈನಲ್ಲಿ ಪ್ರತಿ ಕೆ.ಜಿಗೆ ₹35ರಂತೆ ಈರುಳ್ಳಿಯ ಚಿಲ್ಲರೆ ಮಾರಾಟಕ್ಕೆ ಕೇಂದ್ರ ಗುರುವಾರ ಚಾಲನೆ ನೀಡಿದೆ.

ರಾಷ್ಟ್ರೀಯ ಸಹಕಾರ ಗ್ರಾಹಕರ ಮಹಾಮಂಡಳ (ಎನ್‌ಸಿಸಿಎಫ್) ಹಾಗೂ ರಾಷ್ಟ್ರೀಯ ಕೃಷಿ ಸಹಕಾರ ಮಾರುಕಟ್ಟೆ ಒಕ್ಕೂಟವು (ನಾಫೆಡ್) 4.7 ಲಕ್ಷ ಟನ್ ಈರುಳ್ಳಿ ದಾಸ್ತಾನು ಹೊಂದಿವೆ. ಈ ಏಜೆನ್ಸಿಗಳು ತಮ್ಮ ಸ್ವಂತ ಮಳಿಗೆಗಳು ಮತ್ತು ಸಂಚಾರಿ ವಾಹನಗಳ ಮೂಲಕ ಈರುಳ್ಳಿಯ ಚಿಲ್ಲರೆ ಮಾರಾಟ ಮಾಡುತ್ತಿವೆ. ದೆಹಲಿ-ಎನ್‌ಸಿಆರ್ ಮತ್ತು ಮುಂಬೈನ ಪರೇಲ್ ಮತ್ತು ಮಲಾಡ್‌ನಲ್ಲಿ 38 ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಈರುಳ್ಳಿ ಮಾರಾಟ ಮಾಡಲಾಗುವುದು ಎಂದು ಕೇಂದ್ರ ತಿಳಿಸಿದೆ.

ಕೇಂದ್ರೀಯ ಭಂಡಾರ, ಮದರ್ ಡೈರಿಯ ಸಫಲ್, ಇ-ಕಾಮರ್ಸ್ ವೇದಿಕೆಗಳಲ್ಲಿಯೂ ಈರುಳ್ಳಿಯನ್ನು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತದೆ. ಈರುಳ್ಳಿಯ ಚಿಲ್ಲರೆ ಬೆಲೆ ನವದೆಹಲಿಯಲ್ಲಿ ಪ್ರತಿ ಕೆ.ಜಿಗೆ ₹60 ಇದೆ.

ಈರುಳ್ಳಿ ಚಿಲ್ಲರೆ ಮಾರಾಟಕ್ಕೆ ಚಾಲನೆ ನೀಡಿದ ಬಳಿಕ ಮಾತನಾಡಿದ ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ, 'ಆಹಾರ ಹಣದುಬ್ಬರವನ್ನು ನಿಯಂತ್ರಣದಲ್ಲಿಡುವುದು ಸರ್ಕಾರದ ಆದ್ಯತೆಯಾಗಿದೆ. ಮೊದಲ ಹಂತವಾಗಿ ದೆಹಲಿ-ಎನ್‌ಸಿಆರ್ ಮತ್ತು ಮುಂಬೈನಲ್ಲಿ ಈರುಳ್ಳಿ ಮಾರಾಟಕ್ಕೆ ಚಾಲನೆ ನೀಡಲಾಗಿದೆ. ಸೆಪ್ಟೆಂಬರ್ 2ನೇ ವಾರದಿಂದ ಎರಡನೇ ಹಂತದಲ್ಲಿ ಕೋಲ್ಕತ್ತ, ಗುವಾಹಟಿ, ಹೈದರಾಬಾದ್, ಚೆನ್ನೈ, ಬೆಂಗಳೂರು, ಅಹಮದಾಬಾದ್ ಮತ್ತು ರಾಯ್‌ಪುರದಲ್ಲಿ ಮಾರಾಟ ಮಾಡಲಾಗುವುದು. ಮೂರನೇ ವಾರದಿಂದ ದೇಶದೆಲ್ಲೆಡೆ ಮಾರಾಟ ಆರಂಭಿಸಲಾಗುವುದು' ಎಂದು ಹೇಳಿದ್ದಾರೆ.

ಎನ್‌ಸಿಸಿಎಫ್ ಮತ್ತು ನಾಫೆಡ್ ಪ್ರತಿ ಕೆ.ಜಿಗೆ ಸರಾಸರಿ ₹28ರಂತೆ ಈರುಳ್ಳಿಯನ್ನು ರೈತರಿಂದ ಖರೀದಿಸಿವೆ.

## ಬೆಂಗಳೂರಲ್ಲಿ ಕೆ.ಜಿ ಈರುಳ್ಳಿ ದರ ₹60

ಪ್ರಜಾವಾಣಿ ವಾರ್ತೆ

ಮಹಾರಾಷ್ಟ್ರದಿಂದ ಕರ್ನಾಟಕಕ್ಕೆ ಬರುತ್ತಿರುವ ಗುಣಮಟ್ಟದ ದೊಡ್ಡ ಗಾತ್ರದ ಈರುಳ್ಳಿ ಕ್ವಿಂಟಲ್‌ಗೆ ₹4,800ಕ್ಕೆ ಮುಟ್ಟಿದೆ. ರಾಜ್ಯದ ಚಿತ್ರದುರ್ಗ ಮತ್ತು ಹಗರಿಬೊಮ್ಮನಹಳ್ಳಿಯಿಂದ ಮಾತ್ರ ಈರುಳ್ಳಿ ಪೂರೈಕೆ ಯಾಗುತ್ತಿದೆ. ಕಡಿಮೆ ಆವಕದಿಂದ ದರ ಏರಿಕೆಯಾಗಿದ್ದು, ಚಿಲ್ಲರೆ ಮಾರುಕಟ್ಟೆಯಲ್ಲಿ ಕೆ.ಜಿ ಈರುಳ್ಳಿ ಧಾರಣೆ ₹60 ದಾಟಿದೆ ಎಂದು ಯಶವಂತಪುರ ಎಪಿಎಂಸಿಯ ಈರುಳ್ಳಿ ವರ್ತಕ ಜಿ. ಲೋಕಪ್ಪ ಹೇಳುತ್ತಾರೆ.

ಹೆಚ್ಚಿನ ಮಳೆ ಮತ್ತು ಮೋಡ ಕವಿದ ವಾತಾವರಣದಿಂದ ಈರುಳ್ಳಿ ಬೆಳೆ ಕುಂಠಿತವಾಗಿದೆ. ಇದು ದರ ಹೆಚ್ಚಳಕ್ಕೆ ಕಾರಣವಾಗಿದೆ. ಇದರಿಂದಾಗಿ ಈ ವರ್ಷದ ಅಂತ್ಯದ ವೇಳೆಗೂ ಈರುಳ್ಳಿ ಬೆಲೆ ಕಡಿಮೆಯಾಗುವುದು ಅನುಮಾನವಾಗಿದೆ. ರಾಜಸ್ಥಾನದಿಂದ ಈರುಳ್ಳಿ ಬಂದರೆ ದರ ಕಡಿಮೆಯಾಗ ಬಹುದು ಎಂದು ಅವರು 'ಪ್ರಜಾವಾಣಿ'ಗೆ ಗುರುವಾರ ತಿಳಿಸಿದ್ದಾರೆ.

06-09-2024
Prajavani Pg 10

For more information visit
University Library Website
Web - uasbagrilibindia.org
E-mail- librarian@uasbangalore.edu.in